**C.C.No.2845/2023**
**C.W-1**
**P.W-1**

**<u>ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ .ದಂ. ನ್ಯಾಯಾಲಯ ಕುಣಿಗಲ್</u>**

## ಸಿ.ಸಿ.2845/2023

| | | |
|---|---|---|
| ಸಾಕ್ಷಿದಾರರ ಹೆಸರು | : | ಬೋರೇಗೌಡ |
| ತಂದೆಯ ಹೆಸರು | : | ಅಣ್ಣೇಗೌಡ |
| ವಯಸ್ಸು | : | 55 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ | : | ಕಪನಿಪಾಳ್ಯ, ಕುಣಿಗಲ್ ತಾಲ್ಲೂಕು. |

**<u>ಸಾಕ್ಷಿಯನ್ನು ದಿನಾಂಕ:27.04.2026 ರಂದು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.</u>**

**<u>ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:</u>**

ಈ ಪ್ರಕರಣದ ಬಗ್ಗೆ ನನಗೆ ಗೊತ್ತಿಲ್ಲ. ನಾನು ಯಾವುದೇ ದೂರನ್ನು ನೀಡಿರುವುದಿಲ್ಲ. ಸಾಕ್ಷಿಯು ಗುರುತಿಸಿದ ದೂರನ್ನು ನಿಪಿ.1 ಎಂದು, ಸಾಕ್ಷಿಯ ಸಹಿಯನ್ನು **ನಿಪಿ.1(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ಸ್ಥಳ ಪಂಚನಾಮೆಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿಪಿ.2** ಎಂದು, ಅದರಲ್ಲಿನ ಸಹಿಯನ್ನು **ನಿ.ಪಿ.2(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ವಾಹನ ಅಮಾನತು ಪಂಚನಾಮೆಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿಪಿ.3** ಎಂದು, ಅದರಲ್ಲಿನ ಸಹಿಯನ್ನು **ನಿ.ಪಿ.3(ಎ)** ಎಂದು ಗುರುತಿಸಲಾಯಿತು. ಸುಮಾರು 3-4 ವರ್ಷಗಳ ಹಿಂದೆ ನಾನು ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿಪಿ.1 ರಿಂದ 3 ರಲ್ಲಿ ಬರೆದಿರುವ ಮಾಹಿತಿಗಳು ನನಗೆ ಗೊತ್ತಿಲ್ಲ. ನಿಪಿ.1 ರಿಂದ 3 ಅನ್ನು ಮಾಡಿ ಪೋಲಿಸರು ಏನು ಮಾಡಿರುತ್ತಾರೆ ಎಂಬುದು ನನಗೆ ಗೊತ್ತಿಲ್ಲ. ನಿಪಿ.1 ರಿಂದ 3 ರಲ್ಲಿ ಬರೆದಿರುವ ವಿಚಾರಗಳು ನನಗೆ ತಿಳಿದಿರುವುದಿಲ್ಲ. ನಾನು ಪೊಲೀಸರಿಗೆ ಯಾವುದೇ ಮುಂದುವರೆದ ಹೇಳಿಕೆ ನೀಡಿರುವುದಿಲ್ಲ.

**( ಈ ಹಂತರದಲ್ಲಿ ಮಾನ್ಯ ಸ. ಸ. ಅ. ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ನ್ಯಾಯಾಲಯದ ಅನುಮತಿಯನ್ನು ಕೋರಿರುತ್ತಾರೆ. ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಮಾನ್ಯ ಸ.ಸ. ಅ ರವರಿಂದಃ**

ದಿನಾಂಕ:18.09.2022 ರಂದು ಮಧ್ಯಾಹ್ನ 2.30 ರ ಸಮಯದಲ್ಲಿ ಕುಣಿಗಲ್ ನ ಕೊತ್ತಗೆರೆ ಹೋಬಳಿ, ಮಾವಿನಕಟ್ಟೆ ಗ್ರಾಮಕ್ಕೆ ಸೇರಿದ ಬೆಂಗಳೂರಿನ ವಾಸಿ ಬೆಟ್ಟಸ್ವಾಮಿ ರವರ ಜಮೀನಿನ ಮುಂಭಾಗದಲ್ಲಿ ಕುಣಿಗಲ್ ಕಡೆಯಿಂದ ನೀಲತ್ತಹಳ್ಳಿ ಕಡೆಗೆ ಹಾದು ಹೋಗಿರುವ ರಸ್ತೆಯಲ್ಲಿ ಆರೋಪಿ 2 ರವರು ನನ್ನ ತಮ್ಮ ಕೆ ಎ 06 ಹೆಚ್ ಕೆ 9220 ಹೀರೋ ಹೊಂಡಾ ಸ್ಪೆಂಡರ್ ಪ್ಲಸ್ ದ್ವಿಚಕ್ರ ವಾಹನದಲ್ಲಿ ಕಪನಿಪಾಳ್ಯಕ್ಕೆ ಹೋಗಲು ರಸ್ತೆಯ ಎಡಭಾಗದಲ್ಲಿ ಹೋಗುತ್ತಿರುವಾಗ ಕೆ.ಎ-35-ಎಲ್-5308 ನೇ ಹೀರೋ ಹೋಂಡಾ ಪ್ಯಾಷನ್ ಪ್ಲಸ್ ದ್ವಿಚಕ್ರ ವಾಹನದ ಚಾಲಕ ತನ್ನ ವಾಹನವನ್ನು ಅತಿ ವೇಗ ಮತ್ತು ಅಜಾಗರೂಕತೆಯಿಂದ ವಾಹನ ಚಲಾಯಿಸಿ ನನ್ನ ತಮ್ಮನಿಗೆ ಡಿಕ್ಕಿಪಡಿಸಿ ಗಾಯವಾದ ವಿಚಾರವನ್ನು ನನಗೆ ಯಾರೋ ದೂರವಾಣಿ ಕರೆ ಮಾಡಿ ತಿಳಿಸಿದ್ದರು ಎಂದರೆ ಸರಿಯಲ್ಲ. ನಾನು ಸ್ಥಳಕ್ಕಿ ಹೋಗಿ ನನ್ನ ತಮ್ಮನನ್ನು ಕುಣಿಗಲ್ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಬೆಂಗಳೂರಿನ ಬಾಸ್ ಸ್ಪೆಷಾಲಿಟಿ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಚಿಕಿತ್ಸೆಗೆ ದಾಖಲಿಸಿದ್ದೆ ಎಂದರೆ ಸರಿಯಲ್ಲ. ಘಟನೆಯ ಕುರಿತು ದಿನಾಂಕ 28.09.2022 ರಂದು ನಿಪಿ.1ರಂತೆ ದೂರು ನೀಡಿದ್ದೆ ಎಂದರೆ ಸರಿಯಲ್ಲ.

ದಿನಾಂಕಃ 28.09.2022 ರಂದು ಮಧ್ಯಾಹ್ನ 2.00 ರಿಂದ 2.45 ರವರೆಗೆ ಪೋಲಿಸರು ಘಟನಾ ಸ್ಥಳದ ಪಂಚನಾಮೆ ಮಾಡಿ, ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಚಾಸಾ.3 ಮತ್ತು 4 ರವರು ಸಹ ಇದ್ದು, ನಮ್ಮ ಸಮಕ್ಷಮ ಪಂಚನಾಮೆ ಮಾಡಿ ನಮ್ಮ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನಂತರ ನಿಪಿ.3 ರಂತೆ ಅಪಘಾತಪಡಿಸಿದ ಮತ್ತು ಅಪಘಾತಕ್ಕೀಡಾದ ವಾಹನಗಳನ್ನು ನಮ್ಮ ಸಮಕ್ಷಮ ವಶಪಸಿಡಿಕೊಂಡರು ಎಂದರೆ ಸರಿಯಲ್ಲ. ನಮ್ಮ

ಸಮಕ್ಷಮ ಪಂಚನಾಮೆ ಮಾಡಿದ್ದರೂ ಸಹ ಆರೋಪಿಗೆ ಅನೂಕೂಲ ಮಾಡಲು ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಘಟನೆಯ ಕುರಿತು ದಿನಾಂಕ 28.09.2022 ರಂದು ಮುಂದುವರೆದ ಹೇಳಿಕೆ ನೀಡಿದ್ದೆ ಎಂದರೆ ಸರಿಯಲ್ಲ. ಹೇಳಿಕೆಯ ಭಾಗವನ್ನು ಸಾಕ್ಷಿಗೆ ಓದಿ ಹೇಳಲಾಗಿ ಸಾಕ್ಷಿಯು ಒಪ್ಪಿಕೊಳ್ಳದ ಕಾರಣ ಒಪ್ಪಿಕೊಳ್ಳದ ಹೇಳಿಕೆಯನ್ನು **ನಿಪಿ-4** ಎಂದು ಗುರುತಿಸಲಾಗಿದೆ. ನನಗೆ ಈ ಪ್ರಕರಣದ ಬಗ್ಗೆ ಎಲ್ಲಾ ವಿಚಾರ ಗೊತ್ತಿದ್ದರೂ ಇಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ವಾಟೀ ಸವಾಲುಃಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**

ಮರು ವಿಚಾರಣೆ ಇಲ್ಲ.

**( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಹೇ.ಕೇ. ಸರಿ ಇದೆ .

ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ .ದಂ .
ಕುಣಿಗಲ್